# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಆಹಾರ ಕರ್ನಾಟಕ ನಿಯಮಿತದ ಆಡಳಿತ ಮಂಡಳಿಯನ್ನು ಪುನರ್ ರಚಿಸುವ ಬಗ್ಗೆ.

**ಸರ್ಕಾರದ ಆದೇಶ ಸಂಖ್ಯೆ ಕೃಮಾಇಹ/63/ಕೃರಾಗೊ/2011, ಬೆಂಗಳೂರು, ದಿ:05/11/2011.**

ಓದಲಾಗಿದೆ: ಆಹಾರ ಕರ್ನಾಟಕ ನಿಯಮಿತ ಇವರ ಪತ್ರ ಸಂ:FKL/108/2011-12, ದಿ:11-08-2011.

**ಪ್ರಸ್ತಾವನೆ**

ಕೃಷಿ ಮತ್ತು ಸಂಬಂಧಿತ ವಲಯಗಳಿಗೆ ಬಂಡವಾಳ ಹೂಡಿಕೆಯನ್ನು ಆಕರ್ಷಿಸಲು ಕರ್ನಾಟಕ ಸರ್ಕಾರವು ಕರ್ನಾಟಕ ಕೃಷಿ ವಾಣಿಜ್ಯ ಅಭಿವೃದ್ಧಿ ನೀತಿ 2011ನ್ನು ಘೋಷಿಸಿದೆ. ಕೊಯ್ಲೋತ್ತರ ನಷ್ಟವನ್ನು ಕಡಿಮೆ ಮಾಡುವುದು ಮಾರುಕಟ್ಟೆ ಜೋಡಣೆ ಮತ್ತು ಮೌಲ್ಯ ಸರಪಳಿಗಳ ತಂತ್ರಜ್ಞಾನಗಳನ್ನು ಕೃಷಿ ಮತ್ತು ಆಹಾರ ಸಂಸ್ಕರಣಾ ವಲಯಗಳಲ್ಲಿ ಬೆಳೆಸುವುದು ಈ ನೀತಿಯ ಗುರಿಯಾಗಿದೆ.

ಈ ಸಂಬಂಧ ಕರ್ನಾಟಕ ರಾಜ್ಯದಲ್ಲಿ ಜಾಗತಿಕ ಕೃಷಿ ಬಂಡವಾಳ ಹೂಡಿಕೆ ಮತ್ತು ಆಹಾರ ಸಂಸ್ಕರಣೆ ಸಮಾವೇಶ ನಡೆಸಲು ಕರ್ನಾಟಕ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ನಿಗಮ ನಿಯಮಿತ (KAPPEC) ಸಂಸ್ಥೆಯನ್ನು ನೋಡಲ್ ಏಜನ್ಸಿಯನ್ನಾಗಿ ನೇಮಿಸಿ ಆದೇಶ ಹೊರಡಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ:AHD 172 AFT 2010, ದಿನಾಂಕ 05.03.2011ರಲ್ಲಿ ಆಹಾರ ಕರ್ನಾಟಕ ನಿಯಮಿತವನ್ನು ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಅಭಿವೃದ್ಧಿ ನಿಗಮದ ವ್ಯಾಪ್ತಿಯಿಂದ ಕರ್ನಾಟಕ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ನಿಗಮ ನಿಯಮಿತ (KAPPEC)ಕ್ಕೆ ವರ್ಗಾಯಿಸಲಾಗಿದೆ. ಇದು ಪ್ರತ್ಯೇಕ ಅಸ್ತಿತ್ವ ಹಾಗೂ ಒಂದು ವಿಶೇಷ ಉದ್ದೇಶಿತ ವಾಹನವಾಗಿ ಕಾರ್ಯನಿರ್ವಹಿಸಲು ಸಹ ಅನುಮೋದನೆ ನೀಡಲಾಗಿದೆ. ಪ್ರಸ್ತುತ ಆಹಾರ ಕರ್ನಾಟಕ ನಿಯಮಿತವು ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳ ಅಡಿಯಲ್ಲಿ ಫುಡ್ ಪಾರ್ಕ್‌ಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ಕಾರ್ಯ ನಿರ್ವಹಿಸುತ್ತಿದೆ.

ಈ ದಿಸೆಯಲ್ಲಿ ಕರ್ನಾಟಕ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ನಿಗಮ ನಿಯಮಿತ (KAPPEC) ಸಂಸ್ಥೆಯ 62ನೇ ಆಡಳಿತ ಮಂಡಳಿಯ ಸಭೆಯಲ್ಲಿ ಕರ್ನಾಟಕ ಆಹಾರ ನಿಯಮಿತವನ್ನು ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಅಭಿವೃದ್ಧಿ ನಿಗಮದ ವ್ಯಾಪ್ತಿಯಿಂದ ರಾಜ್ಯದಲ್ಲಿ ಜಾಗತಿಕ ಕೃಷಿ ಬಂಡವಾಳ ಹೂಡಿಕೆ ಮತ್ತು ಆಹಾರ ಸಂಸ್ಕರಣೆ ಸಮಾವೇಶ ನಡೆಸಲು ಕರ್ನಾಟಕ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ನಿಗಮ ನಿಯಮಿತ (KAPPEC)ಕ್ಕೆ ವರ್ಗಾಯಿಸಲಾಗಿದೆ ಹಾಗೂ ಅದು ಪ್ರತ್ಯೇಕ ಅಸ್ತಿತ್ವ ಮತ್ತು ಒಂದು ವಿಶೇಷ ಉದ್ದೇಶಿತ ವಾಹನವಾಗಿ ಕಾರ್ಯನಿರ್ವಹಿಸುತ್ತದೆ. ಮುಂದುವರೆದು ಸಂಸ್ಥೆಯ ಆಡಳಿತ ಮಂಡಳಿಯು ಆಹಾರ ಕರ್ನಾಟಕ ನಿಯಮಿತದ ಆಡಳಿತ ಮಂಡಳಿಯನ್ನು ಪುನರ್ ರಚಿಸಲು ಸರ್ಕಾರವನ್ನು ಕೋರಲು ನಿರ್ಧರಿಸಿತು.

ಆದ್ದರಿಂದ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

..2..

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಆಹಾರ ಕರ್ನಾಟಕ ನಿಯಮಿತದ ಆಡಳಿತ ಮಂಡಳಿಯನ್ನು ಈ ಕೆಳಕಂಡಂತೆ ಪುನರ್ ರಚಿಸಿ ಆದೇಶಿಸಿದೆ:

| | |
|---|---|
| 1) ಮಾನ್ಯ ಕೃಷಿ ಸಚಿವರು | ಅಧ್ಯಕ್ಷರು |
| 2) ಮಾನ್ಯ ತೋಟಗಾರಿಕೆ ಸಚಿವರು | ಉಪಾಧ್ಯಕ್ಷರು |
| 3) ಸರ್ಕಾರದ ಪ್ರಧಾನ ಕಾರ್ಯದರ್ಶಿ, (ಆಹಾರ ಸಂಸ್ಕರಣೆ ಮತ್ತು ಕಟಾವು ತಂತ್ರಜ್ಞಾನ) | ಸದಸ್ಯರು |
| 4) ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ | ಸದಸ್ಯರು |
| 5) ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ | ಸದಸ್ಯರು |
| 6) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ | ಸದಸ್ಯರು |
| 7) ಆಯುಕ್ತರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಅಥವಾ ಅವರ ಪ್ರತಿನಿಧಿ(ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉದ್ಯೋಗ ಮಿತ್ರ ಅಥವಾ ಅವರ ವೃಂದದ ಅಧಿಕಾರಿ). | ಸದಸ್ಯರು |
| 8) ನಿರ್ದೇಶಕರು, ತೋಟಗಾರಿಕೆ ಇಲಾಖೆ | ಸದಸ್ಯರು |
| 9) ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಮತ್ತು ಕಾರ್ಯನಿರ್ವಾಹಕ ಸದಸ್ಯರು, ಕೆ.ಐ.ಎ.ಡಿ.ಬಿ. | ಸದಸ್ಯರು |
| 10) ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 11) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ನಿಗಮ ನಿಯಮಿತ (KAPPEC) | ಸದಸ್ಯರು ಮತ್ತು ಪದನಿಮಿತ್ತ ವ್ಯವಸ್ಥಾಪಕ ನಿರ್ದೇಶಕರು, ಆಹಾರ ಕರ್ನಾಟಕ ನಿಯಮಿತ. |

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ನಿಗಮ ನಿಯಮಿತ (KAPPEC)ರವರು ಆಹಾರ ಕರ್ನಾಟಕ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರಾಗಿ ಸಹ ಕಾರ್ಯನಿರ್ವಹಿಸಲು ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

19/11/11
(ಪರಂಧಾಮಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

5-11-11

ಇವರಿಗೆ

1. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಮಾನ್ಯ ತೋಟಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿಗಳು.

# ಕರ್ನಾಟಕ ಸರ್ಕಾರ

ಸಂಖ್ಯೆ : ಕೃಇ 55 ಕೃರಾಗೊ 2015.

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು,ದಿನಾಂಕ:11-06-2015.

## ತಿದ್ದುಪಡಿ

ಆಹಾರ ಕರ್ನಾಟಕ ನಿಯಮಿತದ ಆಡಳಿತ ಮಂಡಳಿಯನ್ನು ಪುನರ್ರಚಿಸಿ ಹೊರಡಿಸಲಾದ ಸರ್ಕಾರದ ಆದೇಶ ಸಂಖ್ಯೆ: ಕೃಇ 83 ಕೃರಾಗೊ 2011, ದಿನಾಂಕ:05-11-2011 ರಲ್ಲಿನ ಕ್ರಮ ಸಂಖ್ಯೆ (3) ರಲ್ಲಿನ "ಸರ್ಕಾರದ ಪ್ರಧಾನ ಕಾರ್ಯದರ್ಶಿ (ಆಹಾರ ಸಂಸ್ಕರಣೆ ಮತ್ತು ಕಟಾವು ತಂತ್ರಜ್ಞಾನ)" ಎಂಬುದನ್ನು "ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಆಹಾರ ಸಂಸ್ಕರಣೆ ಮತ್ತು ಕಟಾವು ತಂತ್ರಜ್ಞಾನ) " ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಹಾಗೂ ಅವರ ಹೆಸರಿನಲ್ಲಿ,

(ಎಸ್.ಆರ್.ಬಸವರಾಜಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.
(ಸೇವೆಗಳು ಮತ್ತು ಸಮನ್ವಯ)

**ಇವರಿಗೆ:-**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು..
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ತೋಟಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ.
4. ಮಾನ್ಯ ಕೃಷಿ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ.
6. ಅಧ್ಯಕ್ಷರು/ವ್ಯವಸ್ಥಾಪಕ ನಿರ್ದೇಶಕರು, ಆಹಾರ ಕರ್ನಾಟಕ ನಿಯಮಿತ, ನಂ.17, ರಿಚ್ಮಂಡ್ ರಸ್ತೆ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ.
8. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ.
9. ಸರ್ಕಾರದ ಕಾರ್ಯದರ್ಶಿ(ಆಹಾರ ಸಂಸ್ಕರಣೆ ಮತ್ತು ಕಟಾವು ತಂತ್ರಜ್ಞಾನ), ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

--2--

FOOD KARNATAKA LIMITED * BANGALORE-01 * INDIA 39 12/6/15

--2--

10. ಆಯುಕ್ತರು, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಖನಿಜಾ ಭವನ, ಬೆಂಗಳೂರು.
11. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್ ಬಾಗ್, ಬೆಂಗಳೂರು.
12. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ಕಾರ್ಯನಿರ್ವಾಹಕ ಸದಸ್ಯರು, ಕೆ.ಎ.ಐ.ಡಿ.ಬಿ. ಬೆಂಗಳೂರು.
13. ನಿರ್ದೇಶಕರು, ಕೃಷಿ ಇಲಾಖೆ. ಶೇಷಾದ್ರಿ ರಸ್ತೆ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿ-1 & 2, ಕೃಷಿ ಇಲಾಖೆ.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು/ಅಂತರ್ಜಾಲ ತಾಣಕ್ಕೆ.